# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 947 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಕೆ. ಹರಿಪ್ರಸಾದ್ |
| ಉತ್ತರಿಸಬೇಕಾದ ದಿನಾಂಕ | 15/03/2021 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಘಟಕವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳುವಂತೆ ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿದೆಯೇ: ಈ ಬಗ್ಗೆ ಕೇಂದ್ರದಿಂದ ದೊರಕಿರುವ ಪ್ರತಿಕ್ರಿಯೆ ಏನು: (ವಿವರ ನೀಡುವುದು) | ಭಾರತ ಸರ್ಕಾರದ "ಪ್ರಧಾನ ಮಂತ್ರಿ ಸ್ವಸ್ಥ ಸುರಕ್ಷಾ ಯೋಜನೆ"ಯಡಿ "ಆಲ್ ಇಂಡಿಯಾ ಇನ್ಸ್‌ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್" (AIMS) ಎಂಬ ಸೂಪರ್ ಸ್ಪೆಷಾಲಿಟಿ ಬೋಧಕ ಸಂಸ್ಥೆಯನ್ನು ವಿವಿಧ ರಾಜ್ಯಗಳಲ್ಲಿ ಪ್ರಾರಂಭಿಸುವ ಹೊಣೆಯು ಭಾರತ ಸರ್ಕಾರದ್ದಾಗಿರುತ್ತದೆ. ಅದರಂತೆ ಇಂತಹ ಸಂಸ್ಥೆಯನ್ನು ಹೊಂದುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು ಒಂದಾಗಿರುತ್ತದೆ. ಈ ಯೋಜನೆಯ ಮಾನದಂಡಗಳನ್ವಯ ಅಂದಾಜು 200 ಎಕರೆ ಭೂಮಿ, ನಾಲ್ಕು ಪಥಗಳ ಸಾರಿಗೆ ಸಂಪರ್ಕ, ನೀರು, ವಿದ್ಯುತ್ ಸಂಪರ್ಕ ಮತ್ತು ಇತರೆ ಸೌಲಭ್ಯಗಳನ್ನು ಹೊಂದಿರುವ ಸ್ಥಳಗಳನ್ನು ರಾಜ್ಯ ಸರ್ಕಾರವು ಗುರುತಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಬೇಕಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ಪ್ರಾರಂಭಿಕವಾಗಿ ರಾಮನಗರ, ಧಾರವಾಡ, ಬಿಜಾಪುರ, ಕಲಬುರಗಿ ಈ ಜಿಲ್ಲೆಗಳಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿತ್ತು.<br><br>ಜಿಲ್ಲಾಧಿಕಾರಿಗಳ ಕಾರ್ಯಾಲಯ, ಧಾರವಾಡ ಇವರ ದಿನಾಂಕ 18/09/2020 ರ ಪತ್ರದಲ್ಲಿ ಧಾರವಾಡ ತಾಲ್ಲೂಕಿನ ಇಟಗಟ್ಟಿ ಗ್ರಾಮದಲ್ಲಿ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂ ಸ್ವಾಧೀನ ಪಡಿಸಿಕೊಂಡಿರುವ ಜಾಗವು ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವುದಕ್ಕೆ ಹಾಗೂ ಕೇಂದ್ರ ಸರ್ಕಾರವು ನಿಗಧಿ ಪಡಿಸಿರುವ ಮಾನದಂಡಗಳನ್ನು ಪೂರೈಸಲು ಸದರಿ ಸ್ಥಳವು ಸೂಕ್ತವೆಂದು ನಿರ್ಣಯಕ್ಕೆ ಬಂದು, ಹುಬ್ಬಳ್ಳಿ-ಧಾರವಾಡದಲ್ಲಿನ ಜಾಗ ಮತ್ತು ಇತರೆ ಮಾಹಿತಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ 29/09/2020 ರಂದು ಪತ್ರ ಬರೆಯಲಾಗಿದೆ.<br><br>ಕೇಂದ್ರ ಸರ್ಕಾರದ ತಪಾಸಣಾ ತಂಡವು ಈಗಾಗಲೇ ಗುರುತಿಸಲ್ಪಟ್ಟ ಜಾಗಕ್ಕೆ ದಿನಾಂಕ 02/12/2020 ರಂದು ಭೇಟಿ ನೀಡಿ ಪರಿವೀಕ್ಷಣೆ ಮಾಡಿರುತ್ತಾರೆ. |
| ಆ) | ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ನಿಮಾನ್ಸ್ (ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಮೆಂಟಲ್ ಹೆಲ್ತ್ ಅಂಡ್ ನ್ಯೂರೋ ಸೈನ್ಸಸ್) ಸಂಸ್ಥೆಯನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ: ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? | ನಿಮಾನ್ಸ್ ಸಂಸ್ಥೆಯು ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನಕ್ಕೆ ಸಂಬಂದಿಸಿದಂತೆ ಚಿಕಿತ್ಸೆ ನೀಡುವ ರಾಷ್ಟ್ರೀಯ ಸಂಸ್ಥೆಯಾಗಿದ್ದು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಆಡಳಿತಾತ್ಮಕ ನಿಯಂತ್ರಣದಲ್ಲಿರುತ್ತದೆ. ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ಸದರಿ ಸಂಸ್ಥೆಯ ಶಾಖೆಯನ್ನು ತೆರೆಯುವ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಎಂಇಡಿ 157 ಎಂಎಂಸಿ 2021

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು